CN. 6184 26/6/2017

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಅಂಜುಮನ್ ಪಾಲಿಟೆಕ್ನಿಕ್, ಹುಬ್ಬಳ್ಳಿ ಸಂಸ್ಥೆಗೆ 2017-18ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ವಿಸ್ತರಿಸುವ ಬಗ್ಗೆ-

*****

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಇಡಿ 131 ಟಿಪಿಇ 2014, ದಿನಾಂಕ:20-08-2014.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 70 ಟಿಪಿಇ 2016, ದಿನಾಂಕ:17-10-2016.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಡಿಟಿಇ 08 ಡಿವಿಪಿ (2) 2017, ದಿನಾಂಕ:09/05/2017.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಅಧಿಸೂಚನೆಯಲ್ಲಿ The Educational Institutions (Recognization of Minority Educational Institutions Terms and Conditions) (Technical Education) Rules 2014ನ್ನು ಹೊರಡಿಸಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳಿಗೆ ಅಲ್ಪಸಂಖ್ಯಾತ ಸ್ಥಾನಮಾನವನ್ನು ನೀಡಲು / ನವೀಕರಿಸಲು ನಿಯಮಗಳನ್ನು / ಮಾರ್ಗಸೂಚಿಯನ್ನು ರಚಿಸಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ಅಂಜುಮನ್ ಪಾಲಿಟೆಕ್ನಿಕ್, ಹುಬ್ಬಳ್ಳಿ ಖಾಸಗಿ ಶಿಕ್ಷಣ ಸಂಸ್ಥೆಗೆ 2016-17ನೇ ಸಾಲಿಗೆ ಕೆಲವೊಂದು ಷರತ್ತುಗಳನ್ನು ವಿಧಿಸಿ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ವಿಸ್ತರಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರು ಅಂಜುಮನ್ ಪಾಲಿಟೆಕ್ನಿಕ್, ಹುಬ್ಬಳ್ಳಿ ಈ ಸಂಸ್ಥೆಯು 2016-17ನೇ ಸಾಲಿನಲ್ಲಿ ಮತೀಯ ಅಲ್ಪಸಂಖ್ಯಾತ ಸ್ಥಾನಮಾನ ನೀಡಿ ಹೊರಡಿಸಿದ್ದ ಆದೇಶದಲ್ಲಿ ವಿಧಿಸಿದ್ದ 1ನೇ ಷರತ್ತಿನಲ್ಲಿ ಶೇಕಡ 50 ರಷ್ಟು ಸೀಟುಗಳನ್ನು ಸರ್ಕಾರದ ಮೀಸಲಾತಿ ಆದೇಶದನ್ವಯ ನೋಡಲ್ ಸೆಂಟರ್ ಮೂಲಕ ಪ್ರವೇಶಾತಿಯನ್ನು ನೀಡಿ, ತಾಂತ್ರಿಕ ಶಿಕ್ಷಣ ನಿರ್ದೇಶಕರು ತುಂಬಬೇಕೆಂದು ವಿಧಿಸಿರುವ ಷರತ್ತನ್ನು ಮತೀಯ ಅಲ್ಪಸಂಖ್ಯಾತ ಖಾಸಗಿ ಪಾಲಿಟೆಕ್ನಿಕ್‌ನಲ್ಲಿ ಶೇಕಡ 50 ರಷ್ಟು ಸೀಟುಗಳು ಮೈನಾರಿಟಿ ಕೋಟಾ ಸೀಟುಗಳು ಮತ್ತು ಉಳಿಕೆ ಶೇಕಡ 50 ರಷ್ಟು ಸೀಟುಗಳು ಆಡಳಿತ ಮಂಡಳಿ ಸೀಟುಗಳು ಆಗಿರುವ ಕಾರಣ ಪೂರೈಸಲು ಸಾಧ್ಯವಾಗುವುದಿಲ್ಲವೆಂದು, ಸದರಿ ಷರತ್ತನ್ನು ಕೈಬಿಡುವಂತೆ ಕೋರಿರುತ್ತಾರೆ. ಉಳಿದಂತೆ, ಸದರಿ ಸಂಸ್ಥೆಯು ರಾಜ್ಯ ಸರ್ಕಾರವು ತಾಂತ್ರಿಕ ಶಿಕ್ಷಣ ಸಂಸ್ಥೆಗಳಿಗೆ ಅಲ್ಪಸಂಖ್ಯಾತ ಸ್ಥಾನಮಾನವನ್ನು ನೀಡಲು / ನವೀಕರಿಸಲು ರೂಪಿಸಿರುವ ನಿಯಮಗಳ / ಮಾರ್ಗಸೂಚಿಗಳ ಪ್ರಕಾರ ಉಳಿಕೆ ಷರತ್ತುಗಳನ್ನು ಪೂರೈಸಿರುವುದರಿಂದ, ಸದರಿ ಸಂಸ್ಥೆಯು ಈಗಾಗಲೇ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಹೊಂದಿದ್ದು, ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಮುಂದುವರೆಸಲು ಕೋರಿ, ನಿಯತಕಾಲಿಕ ವರದಿ (ಪೀರ್‍ಯಾಡಿಕಲ್ ರಿಪೋರ್ಟ್) ಯನ್ನು ತಾಂತ್ರಿಕ ಶಿಕ್ಷಣ ನಿರ್ದೇಶನಾಲಯಕ್ಕೆ ಸಲ್ಲಿಸಿರುವುದರಿಂದ, ಅಂಜುಮನ್ ಪಾಲಿಟೆಕ್ನಿಕ್, ಹುಬ್ಬಳ್ಳಿ ಖಾಸಗಿ ಶಿಕ್ಷಣ ಸಂಸ್ಥೆಗೆ 2017-18ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ವಿಸ್ತರಿಸಬಹುದೆಂದು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪುಟ 2ಕ್ಕೆ

541 22/6/17

Received 1/06/17

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 60 ಟಿಪಿಇ 2017.**
**ಬೆಂಗಳೂರು, ದಿನಾಂಕ:21-06-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು, ಅಂಜುಮನ್ ಪಾಲಿಟೆಕ್ನಿಕ್, ಹುಬ್ಬಳ್ಳಿ ಖಾಸಗಿ ಶಿಕ್ಷಣ ಸಂಸ್ಥೆಗೆ 2017-18ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಈ ಕೆಳಕಂಡ ಷರತ್ತುಗೊಳಪಡಿಸಿ ವಿಸ್ತರಿಸಿ ಆದೇಶಿಸಿದೆ.

1. ಈ ಪಾಲಿಟೆಕ್ನಿಕ್‌ನ ಆಡಳಿತ ಮಂಡಳಿಯ 2/3 ರಷ್ಟು ಸದಸ್ಯರು ಮತೀಯ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದವರಾಗಿರಬೇಕು.

2. ಪ್ರತಿ ಕೋರ್ಸಿನ ಶೇ.50ರಷ್ಟು ಸೀಟುಗಳನ್ನು ಆಡಳಿತ ಮಂಡಳಿಯ ನಡೆಸಲ್ಪಡುತ್ತಿರುವ ಮತೀಯ ಸಮುದಾಯ ವಿದ್ಯಾರ್ಥಿಗಳಿಂದ ತುಂಬಬೇಕಾಗಿದ್ದು, ಅದರಲ್ಲಿ ಶೇ.75 ರಷ್ಟು ಸೀಟುಗಳನ್ನು ಕರ್ನಾಟಕ ರಾಜ್ಯದಲ್ಲಿನ ಸದರಿ ಸಂಸ್ಥೆಯು ನಡೆಸಲ್ಪಡುತ್ತಿರುವ ಭಾಷಾ ಸಮುದಾಯದ ಅಭ್ಯರ್ಥಿಗಳಿಂದ ತುಂಬತಕ್ಕದ್ದು.

3. ಸದರಿ ಶಿಕ್ಷಣ ಸಂಸ್ಥೆಗೆ 2018-19ನೇ ಸಾಲಿನಲ್ಲಿ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಮುಂದುವರೆಸುವ ಬಗ್ಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 131 ಟಿಪಿಇ 2014, ದಿ:20-08-2014ರಲ್ಲಿನ ನಿಯಮಗಳು / ಮಾರ್ಗಸೂಚಿಯಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S. Venkatesh

(ಎಸ್.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

ಗೆ:
1. ತಾಂತ್ರಿಕ ಶಿಕ್ಷಣ ನಿರ್ದೇಶಕರು, ಬೆಂಗಳೂರು
2. ಕಾರ್ಯದರ್ಶಿಗಳು, ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು
3. ಕಾರ್ಯದರ್ಶಿಗಳು, ಅಂಜುಮನ್ ಪಾಲಿಟೆಕ್ನಿಕ್, ಹುಬ್ಬಳ್ಳಿ
4. ಪ್ರಾಂಶುಪಾಲರು, ಅಂಜುಮನ್ ಪಾಲಿಟೆಕ್ನಿಕ್, ಹುಬ್ಬಳ್ಳಿ (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ)
5. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ / ಒಡಿಜಿಸಿ

ಹಿಂಬರಹ ಸಂಖ್ಯೆ: ಡಿಟಿಇ 08 ಡಿವಿಪಿ(2) 2017 ದಿನಾಂಕ: 03/07/2017.

ಸರ್ಕಾರದ ಆದೇಶದ ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಸಂಬಂಧಪಟ್ಟ ಈ ಕೆಳಕಂಡ ಅಧಿಕಾರಿಗಳಿಗೆ ಹಾಗೂ ವಿಭಾಗಗಳಿಗೆ ಕಳುಹಿಸಲಾಗಿದೆ.

01. ಅಧ್ಯಕ್ಷರು / ಕಾರ್ಯದರ್ಶಿಗಳು, ಅಂಜುಮನ್ ಪಾಲಿಟೆಕ್ನಿಕ್, ಹುಬ್ಬಳ್ಳಿ.
02. ಪ್ರಿನ್ಸಿಪಾಲರು, ಅಂಜುಮನ್ ಪಾಲಿಟೆಕ್ನಿಕ್, ಹುಬ್ಬಳ್ಳಿ. ಅಯೋಧ್ಯಾನಗರ, ಈದ್ ಗಾಹ ಮೈದಾನ, ಹುಬ್ಬಳ್ಳಿ-580028
03. ಜಂಟಿ ನಿರ್ದೇಶಕರು [ಆಡಳಿತ/ಪರೀಕ್ಷೆ/ತನಿಖೆ/ಎಟಿಎಸ್]
04. ಉಪ ನಿರ್ದೇಶಕರು [ಯೋಜನೆ/ಪರೀಕ್ಷೆ/ತನಿಖೆ]
05. ಸಹಾಯಕ ನಿರ್ದೇಶಕರು [ಯೋಜನೆ/ಪರೀಕ್ಷೆ/ತನಿಖೆ/ಎಂಪಿಸಿ]
06. ಉಪ ನಿರ್ದೇಶಕರು (ಸಾಂಖ್ಯಿಕ ವಿಭಾಗ)
07. ಆಡಳಿತಾಧಿಕಾರಿಗಳಿಗೆ
08. ರಿಜಿಸ್ಟ್ರಾರ್ (ಪರೀಕ್ಷೆ/ಎಸಿಎಂ)
09. ಅಧೀಕ್ಷಕರು, ಎಸಿಎಂ ವಿಭಾಗ
10. ಕಾರ್ಯನಿರ್ವಾಹಕರು, ಎಸಿಎಂ(2) ವಿಭಾಗ
11. ಕಾರ್ಯನಿರ್ವಾಹಕರು, ಡಿವಿಪಿ(1) ವಿಭಾಗ
12. ಸರ್ಕಾರಿ ಆದೇಶಗಳ ಕಡತಕ್ಕೆ
13. ಈ ಗೌರ್‌ನೆನ್ಸ್ ಸೆಲ್‌ಗೆ
14. ಕಛೇರಿ ಪ್ರತಿ.

06/07/17

ಜಂಟಿ ನಿರ್ದೇಶಕರು (ಎಟಿಎಸ್)

3/7/2017